# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

ವಿಷಯ: ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಹೊಸಕೋಟೆ ಮತ್ತು ದೇವನಹಳ್ಳಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಈ ವಸತಿ ಶಾಲೆಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

ಉಲ್ಲೇಖ:
1. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲೂಡಿ 159 ಎಂಡಿಎಸ್ 2021 ದಿನಾಂಕ: 12.04.2021
2. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲೂಡಿ 159 ಎಂಡಿಎಸ್ 2021 ದಿನಾಂಕ: 27.04.2021
3. ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಚಿಕ್ಕಮಗಳೂರು ಜಿಲ್ಲೆ ರವರ ಪತ್ರ ಸಂಖ್ಯೆ:ಅಸಂಕಇ/ಮೊದೇನಿ/ಸಿಆರ್-01/2021-22 ದಿನಾಂಕ:05-07-2021.
4. ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಪತ್ರ ಸಂಖ್ಯೆ:ಅಸಂಕಇ/ಬೆಂಗ್ರಾ/ಮೊದೇ/ಸಿಆರ್-19/2020-21 ದಿ:08-07-2021.

>>><<<

ಪ್ರಸ್ತಾವನೆ:-

ಉಲ್ಲೇಖ(1)ರ ಸರ್ಕಾರಿ ಆದೇಶದಲ್ಲಿ 2020-21 ನೇ ಸಾಲಿನಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು 2021-22ನೇ ಸಾಲಿನವರೆಗೆ ಮುಂದುವರೆಸಲು ಆದೇಶಿಸಿದೆ. ಉಲ್ಲೇಖ(2)ರ ಸರ್ಕಾರಿ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ವಸತಿ ಶಾಲೆ/ವಸತಿ ಕಾಲೇಜುಗಳ ನಿರ್ವಹಣೆಗಾಗಿ ಹಾಗೂ ಮೌಲಾನ ಆಜಾದ್ ಮಾದರಿ ಶಾಲೆ/ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ/ವಸತಿ ಶಾಲೆ/ವಸತಿ ಕಾಲೇಜುಗಳಿಗೆ ಮೂಲಸೌಕರ್ಯಗಳನ್ನು ಕಲ್ಪಿಸಲು ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಹೊಸಕೋಟೆ ಮತ್ತು ದೇವನಹಳ್ಳಿ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಪ್ರಸ್ತುತ 2021-22ನೇ ಶೈಕ್ಷಣಿಕ ಸಾಲಿನಲ್ಲಿ ಅಗತ್ಯವಾಗಿರುವ ಮೂಲಭೂತ ಸೌಕರ್ಯಗಳಾದ ಸೇಜ್ ಡ್ರೈಯಾಸ್, ತಟ್ಟೆ ಸ್ಟ್ಯಾಂಡ್, ಊಟದ ತಟ್ಟೆ, ಲೋಟ, ಡಸ್ಟ್‌ಬಿನ್, ಕ್ರೀಡಾ ಸಾಮಗ್ರಿ, ಶೂ ರ್‍ಯಾಕ್, ಚೇರ್, ಗ್ರಂಥಾಲಯ ಬೀರುಗಳು ತೋಟಗಾರಿಕೆ ಪರಿಕರಗಳು ಲ್ಯಾಬ್ ಟೇಬಲ್, ಯುಪಿಎಸ್, ಸ್ಟವ್ ಹಾಗೂ ಇತರೆ ಸಾಮಗ್ರಿಗಳನ್ನು ಖರೀದಿಸಲು ಅನುದಾನ ಬಿಡುಗಡೆ ಮಾಡುವಂತೆ ಚಿಕ್ಕಮಗಳೂರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ರವರು ಉಲ್ಲೇಖ(3) ಮತ್ತು (4)ರಲ್ಲಿ ಬೇಡಿಕೆಯನ್ನು ಸಲ್ಲಿಸಿರುತ್ತಾರೆ.

ಅದರಂತೆ, ಹಾಸನ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹೊಳೆನರಸೀಪುರ, ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಲುವಾಗಿಲು, ಮೊರಾರ್ಜಿ ದೇಸಾಯಿ ವಸತಿ ಶಾಲೆ ಅರಕಲಗೂಡು ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆ ಅರಸೀಕೆರೆಗಳಿಗೆ 2021-22ನೇ ಶೈಕ್ಷಣಿಕ ಸಾಲಿನಲ್ಲಿ ಅಗತ್ಯವಾಗಿರುವ ಮೂಲಭೂತ ಸೌಕರ್ಯಗಳನ್ನು ಖರೀದಿಸಲು ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಶಿರಾ ತುಮಕೂರು ಜಿಲ್ಲೆ ಈ ವಸತಿ ಶಾಲೆಗೆ ವಾಟರ್ ಹೀಟರ್‌ಗಳ ರಿಪೇರಿ, ಡಿಜಿಟಲ್ ಗ್ರಂಥಾಲಯದ ಎಲೆಕ್ಟ್ರಿಕಲ್ ಮತ್ತು ವೈರಿಂಗ್ ವೆಚ್ಚ ಹಾಗೂ ಟು ಟಯರ್ ಕಾಟ್‌ಗಳ ಪೈಂಟಿಂಗ್ ವೆಚ್ಚದ ಹಿಂಬಾಕಿ ಪಾವತಿಸಲು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರಿಗೆ ಅನುದಾನ ಬಿಡುಗಡೆ ಮಾಡಲು ನಿರ್ಧರಿಸಿದ್ದು ಅದರಂತೆ ಈ ಆದೇಶ.

Cont..2

# ಆದೇಶ

ಸಂಖ್ಯೆ:ಅಸಂನಿ/ಆ/ಅನು/ವಶಾ/ಸಿಆರ್-04(059)/2021-22 ದಿನಾಂಕ:22.07.2021

ಪ್ರಸ್ತಾವನೆಗಳಲ್ಲಿ ವಿವರಿಸಿರುವ ಅಂಶಗಳನ್ನಾಧರಿಸಿ, ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಹೊಸಕೋಟೆ ಮತ್ತು ದೇವನಹಳ್ಳಿ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ 2021-22ನೇ ಶೈಕ್ಷಣಿಕ ಸಾಲಿನಲ್ಲಿ ಅಗತ್ಯವಾಗಿರುವ ಮೂಲಭೂತ ಸೌಕರ್ಯಗಳನ್ನು ಖರೀದಿಸಲು ವಾಟರ್ ಹೀಟರ್‌ಗಳ ರಿಪೇರಿ, ಡಿಜಿಟಲ್ ಗ್ರಂಥಾಲಯದ ಎಲೆಕ್ಟ್ರಿಕಲ್ ಮತ್ತು ವೈರಿಂಗ್ ವೆಚ್ಚ ಹಾಗೂ ಟು ಟಯರ್ ಕಾಟ್‌ಗಳ ಪೈಂಟಿಂಗ್ ವೆಚ್ಚದ ಹಿಂಬಾಕಿ ಪಾವತಿಸಲು **ಅನುಬಂಧ-01**ರಲ್ಲಿ ನಮೂದಿಸಿರುವಂತೆ ಒಟ್ಟು **ರೂ.40,00,000/-(ನಲವತ್ತು ಲಕ್ಷ ರೂ.ಗಳು ಮಾತ್ರ)**ಗಳನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಅನುದಾನ ಬಿಡುಗಡೆ ಮಾಡಿದೆ.

| ಅನುಬಂಧ-01 | | | |
|---|---|---|---|
| ಕ್ರ ಸಂ | ಜಿಲ್ಲೆ | ಶಾಲೆಯ ಹೆಸರು & ಸ್ಥಳ | ಮಂಜೂರಾದ ಅನುದಾನ (ರೂ.ಗಳಲ್ಲಿ) |
| 1 | ಚಿಕ್ಕಮಗಳೂರು | ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ತೇಗೂರು. | 10,00,000/- |
| 2 | ಬೆಂಗಳೂರು ಗ್ರಾಮಾಂತರ | ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ದೇವನಹಳ್ಳಿ. | 15,00,000/- |
| 3 | | ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಗಿಡ್ಡಪ್ಪನಹಳ್ಳಿ, ಹೊಸಕೋಟೆ. | 15,00,000/- |
| | | **ಒಟ್ಟು** | **40,00,000/-** |

**ನಿಬಂಧನೆಗಳು:-**

1) ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡುವಂತಿಲ್ಲ. ತಪ್ಪಿದ್ದಲ್ಲಿ ಮುಂದಿನ ಎಲ್ಲಾ ಆಗು ಹೋಗುಗಳಿಗೆ ತಮ್ಮನ್ನು ನೇರ ಹೊಣೆಗಾರನ್ನಾಗಿ ಮಾಡಲಾಗುವುದು.
2) ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವು ಶಾಲಾವಾರು ಮೂಲಸೌಕರ್ಯಗಳ ಬೇಡಿಕೆಗೆ ಅನುಗುಣವಾಗಿರುತ್ತದೆ.
3) ಸಂಬಂಧಪಟ್ಟ ಜಿಲ್ಲಾ ವ್ಯಾಪ್ತಿಯ ಅಲ್ಪಸಂಖ್ಯಾತರ ವಸತಿ ಶಾಲೆಗಳಿಗೆ ಬೇಡಿಕೆಗೆ ಅನುಗುಣವಾಗಿ ಮಾರುಕಟ್ಟೆಯ ಸ್ಪರ್ಧಾತ್ಮಕ ದರಗಳಲ್ಲಿ ಮೂಲಸೌಕರ್ಯಗಳನ್ನು ಖರೀದಿಸತಕ್ಕದ್ದು.
4) ಎಲ್ಲಾ ಖರ್ಚು ವೆಚ್ಚಗಳನ್ನು ಕೆ.ಟಿ.ಪಿ.ಪಿ ಕಾಯ್ದೆಯ ನಿಯಮಾನುಸಾರ ಖರೀದಿಸತಕ್ಕದ್ದು.

Cont..3

5) ಖರೀದಿಸಿದ ಸಾಮಗ್ರಿಗಳನ್ನು ದಾಸ್ತಾನು ವಹಿಯಲ್ಲಿ ಕಡ್ಡಾಯವಾಗಿ ನಮೂದಿಸಿ ನಿರ್ವಹಿಸುವುದು.

6) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಖರ್ಚು ಭರಿಸಿರುವ ಅನುದಾನದ ವಿವರ, (ಖಜಾನೆಯಿಂದ ಪಡೆದ 62ಬಿ ಪ್ರತಿಯೊಂದಿಗೆ) ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ಆಬ್ಜೆಕ್ಟ್ ಕೋಡ್ (059) ಲೆಕ್ಕಶೀರ್ಷಿಕೆ 2225-04-277-0-10 ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆ ರಾಜ್ಯವಲಯ ಯೋಜನೆ 2021-22ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಭರಿಸುವುದು.

ನಿರ್ದೇಶಕರು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ಬೆಂಗಳೂರು.

ಪ್ರತಿಯನ್ನು:-

1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
3. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ-3, ಬೆಂಗಳೂರು.
4. ಉಪ ನಿರ್ದೇಶಕರು, ಖಜಾನೆ ಗಣಕೀಕರಣ ಕೇಂದ್ರ, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
5. ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಗತ್ಯಕ್ರಮಕ್ಕಾಗಿ
6. ಸಂಬಂಧಪಟ್ಟ ಜಿಲ್ಲಾ ಖಜಾನಾಧಿಕಾರಿಗಳು.
7. ಲೆಕ್ಕಪತ್ರ ಶಾಖೆ.
8. ಹೆಚ್ಚುವರಿ ಪ್ರತಿ.
9. ಕಛೇರಿ ಪ್ರತಿ.